## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2012-13ನೇ ಸಾಲಿನಲ್ಲಿ ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ ಮಾರ್ಗ ಸೂಚಿಗಳು.

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 12 ಸೇಸೌವ 2012, ಬೆಂಗಳೂರು, ದಿನಾಂಕ: 28.4.2012

ಓದಲಾಗಿದೆ:

1. ಸರ್ಕಾರಿ ಆದೇಶ ಸಂಖ್ಯೆ: ಡಿಪಿಎಆರ್ 4 ಎಸ್‌ಟಿಆರ್ 2001, ದಿನಾಂಕ: 22-11-2001.
2. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 12 ಸೇಸೌವ 2011, ದಿನಾಂಕ: 27-4-2011.
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 12 ಸೇಸೌವ 2011, ದಿನಾಂಕ: 31-5-2011.

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ: 22.11.2001ರ ಸರ್ಕಾರದ ಆದೇಶದಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ವಿಸ್ತೃತ ಮಾರ್ಗಸೂಚಿಗಳನ್ನು ನೀಡಲಾಗಿದೆ. ಈ ಮಾರ್ಗಸೂಚಿಗಳ ಪ್ರಕಾರ ಸರ್ಕಾರಿ ನೌಕರರ ವರ್ಗಾವಣೆಗಳನ್ನು ಪ್ರತಿ ವರ್ಷ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಮಾತ್ರ ಕೆಲವು ಷರತ್ತುಗಳಿಗೊಳಪಟ್ಟು ಮಾಡಬಹುದಾಗಿದೆ.

ಮೇಲೆ ಓದಲಾದ ದಿನಾಂಕ: 27.4.2011 ಹಾಗೂ 31.5.2011ರ ಆದೇಶಗಳಲ್ಲಿ ದಿನಾಂಕ: 22.11.2001ರ ಮಾರ್ಗಸೂಚಿಗಳನ್ನೇ ಅನುಸರಿಸಿ 2011-12ನೇ ಸಾಲಿನ ವರ್ಗಾವಣಾ ಮಾರ್ಗಸೂಚಿಗಳನ್ನು ಹೊರಡಿಸಲಾಗಿತ್ತು.

ಪ್ರಸ್ತುತ 2012-13ನೇ ಸಾಲಿನಲ್ಲಿ ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ ದಿನಾಂಕ: 22.11.2001ರ ಸರ್ಕಾರದ ಆದೇಶದ ಮಾರ್ಗಸೂಚಿಗಳನ್ನೇ ಅನುಸರಿಸಿ, ವರ್ಗಾವಣೆಗಳನ್ನು ಮಾಡುವ ಬಗ್ಗೆ ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

### ಆದೇಶ

2012-13ನೇ ಸಾಲಿನಲ್ಲಿ ಪೊಲೀಸು ಸಿಬ್ಬಂದಿ ಮಂಡಳಿ (Police Establishment Board)ಯ ವ್ಯಾಪ್ತಿಗೊಳಪಡುವ ಪೊಲೀಸು ಸಿಬ್ಬಂದಿಯನ್ನು ಮತ್ತು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2007ರ ವ್ಯಾಪ್ತಿಗೊಳಪಡುವ ಶಿಕ್ಷಕರನ್ನು, ಹಾಗೂ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ವೈದ್ಯಕೀಯ ಅಧಿಕಾರಿಗಳು ಮತ್ತು ಇತರ ಸಿಬ್ಬಂದಿ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2011ರ ವ್ಯಾಪ್ತಿಗೊಳಪಡುವ ವೈದ್ಯಕೀಯ

ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ, ಇತರ ಸರ್ಕಾರಿ ನೌಕರರನ್ನು ಈ ಕೆಳಕಂಡ ಸಂದರ್ಭಗಳಲ್ಲಿ ಮಾತ್ರ ವರ್ಗಾವಣೆ ಮಾಡಬಹುದು :-

1. ಖಾಲಿ ಇರುವ ಆಡಳಿತಾತ್ಮಕ ಹಿತದೃಷ್ಟಿಯಿಂದ ಅತ್ಯಾವಶ್ಯಕವಾಗಿ ತುಂಬಬೇಕಾದ ಹುದ್ದೆಗಳ ಪ್ರಕರಣಗಳು, ತತ್ಪರಿಣಾಮವಾಗಿ ಖಾಲಿಯಾಗುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕರಣಗಳು;

2. ಪತಿ-ಪತ್ನಿ ಪ್ರಕರಣಗಳು;

3. ಪರಸ್ಪರ ವರ್ಗಾವಣೆಗಳು - ಸಂಬಂಧಿಸಿದ ಸಿಬ್ಬಂದಿಯ ಒಪ್ಪಿಗೆ ಪತ್ರದೊಂದಿಗೆ;

4. ತೀವ್ರತರವಾದ ಖಾಯಿಲೆಯಿಂದ ಬಳಲುತ್ತಿರುವ ನೌಕರರ / ನೌಕರರ ಅವಲಂಬಿತರ / ತಂದೆ ತಾಯಿಯವರ ವೈದ್ಯಕೀಯ ಚಿಕಿತ್ಸೆ / ಆರೋಗ್ಯದ ಹಿತದೃಷ್ಟಿಯಿಂದ ಮಾಡಬೇಕಾದ ವರ್ಗಾವಣೆಗಳು;

5. ಸಾರ್ವಜನಿಕರಿಂದ ಸ್ವೀಕೃತವಾದ ದೂರುಗಳ ಮೇರೆಗೆ ಇಲಾಖಾ ವಿಚಾರಣೆಗೊಳಪಟ್ಟ ಪ್ರಕರಣಗಳು;

6. ಮುಂಬಡ್ತಿಯಿಂದ ತುಂಬಬೇಕಾದ ಖಾಲಿ ಹುದ್ದೆಗಳಿಗೆ ಮಾತ್ರ;

7. ಮುಂದಿನ ಎರಡು ವರ್ಷಗಳಲ್ಲಿ ನಿವೃತ್ತಿ ಹೊಂದಲಿರುವ ಸಿಬ್ಬಂದಿಯ ಕೋರಿಕೆಗಳು.

2. ಒಂದು ಇಲಾಖೆಯಿಂದ ಇನ್ನೊಂದು ಇಲಾಖೆಗೆ ಅಧಿಕಾರಿ / ನೌಕರರ ನಿಯೋಜನೆಯನ್ನು ವರ್ಗಾವಣೆ ಅವಧಿಯಲ್ಲಿ ಮಾತ್ರ ಮಾಡತಕ್ಕದ್ದು. ಸಂಬಂಧಿತ ಇಲಾಖೆಯ ಸ್ಪಷ್ಟ ಕೋರಿಕೆಯಿಲ್ಲದೇ ನಿಯೋಜನೆ ಮೇಲೆ ನೇಮಕ ಮಾಡತಕ್ಕದ್ದಲ್ಲ.

3. ಯಾವುದೇ ಅಧಿಕಾರಿ / ನೌಕರರು ಕಡ್ಡಾಯ ನಿರೀಕ್ಷಣೆ ಸಂದರ್ಭಗಳು ಉದ್ಭವವಾಗದ ರೀತಿಯಲ್ಲಿ ವರ್ಗಾವಣೆಗಳನ್ನು ಮಾಡತಕ್ಕದ್ದು.

4. ಗ್ರೂಪ್-ಎ, ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ನೌಕರರ ವರ್ಗಾವಣೆಯನ್ನು ದಿನಾಂಕ 22.11.2001ರ ಸರ್ಕಾರಿ ಆದೇಶ ಸಂಖ್ಯೆ: ಡಿಪಿಎಆರ್ 4 ಎಸ್‌ಟಿಆರ್ 2001ರಲ್ಲಿ ನಿಗದಿಪಡಿಸಿರುವ ಸಂಬಂಧಿತ ವೃಂದ ನಿರ್ವಹಣಾ ಪ್ರಾಧಿಕಾರಗಳು ಮಾಡತಕ್ಕದ್ದು.

5. ಈ ರೀತಿ ಮಾಡಲಾಗುವ ಒಟ್ಟು ವರ್ಗಾವಣೆಗಳು ಗ್ರೂಪ್ – ಎ ಮತ್ತು ಗ್ರೂಪ್ – ಬಿ ವೃಂದಕ್ಕೆ ಸಂಬಂಧಿಸಿದಂತೆ ಕಾರ್ಯಕಾರಿ ವೃಂದಬಲ (Working strength) ಶೇಕಡ 3 ಹಾಗೂ ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದಕ್ಕೆ ಸಂಬಂಧಿಸಿದಂತೆ ಶೇಕಡ 4.5 ಮೀರುವಂತಿಲ್ಲ. *ರಾಜ್ಯದಲ್ಲಿನ ಬರದ ಹಿನ್ನೆಲೆಯಲ್ಲಿ ಅತಿ ಅವಶ್ಯಕವಾದ ಹಾಗೂ ನಿಯಮಾವಳಿಗಳಂತೆ ಅರ್ಹವಿರುವ ಪ್ರಕರಣಗಳಲ್ಲಿ ಮಾತ್ರ ವರ್ಗಾವಣೆಯನ್ನು ಪರಿಗಣಿಸತಕ್ಕದ್ದು.*

6. ಮೇಲ್ಕಂಡಂತೆ ವರ್ಗಾವಣೆ ಪ್ರಕ್ರಿಯೆಗಳನ್ನು ವೃಂದ ನಿರ್ವಹಣಾ ಪ್ರಾಧಿಕಾರದ ಶಿಫಾರಸ್ಸುಗಳ ಮೇಲೆ ಈ ಆದೇಶದ ದಿನಾಂಕದಿಂದ *ದಿನಾಂಕ: 25.5.2012ರ* ಅವಧಿಯಲ್ಲಿ ಮಾಡತಕ್ಕದ್ದು. ಈ ಅವಧಿಯ ನಂತರ ಯಾವುದೇ ವರ್ಗಾವಣೆ ಮಾಡಬೇಕಾದಲ್ಲಿ ಸಂಬಂಧಿತ ವೃಂದ ನಿರ್ವಹಣಾ ಪ್ರಾಧಿಕಾರದ ಶಿಫಾರಸ್ಸಿನೊಂದಿಗೆ ಮಾನ್ಯ ಮುಖ್ಯಮಂತ್ರಿಯವರ ಪೂರ್ವಾನುಮೋದನೆಯನ್ನು ಕಡತದಲ್ಲಿ ಪಡೆದ ನಂತರವೇ ಮಾಡತಕ್ಕದ್ದು.

7. ಉಳಿದಂತೆ ದಿನಾಂಕ: 22.11.2001ರ ಆದೇಶದಲ್ಲಿನ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ದೇವರಾಜು)
ಸರ್ಕಾರದ ಉಪ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು)

*ಇವರಿಗೆ:*

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 1000 ಪ್ರತಿಗಳನ್ನು ಸಿಆಸುಇ (ಸೇವಾ ನಿಯಮಗಳು – ಬಿ) ಶಾಖೆಗೆ ಕಳುಹಿಸಬೇಕೆಂದು ಕೋರಲಾಗಿದೆ.

*ಪ್ರತಿ:*

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು